All India Radio: Bangalore
National Bulletin In Kannada
27.01.2026  07.35 a.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**<><><><>**

ಮುಖ್ಯಾಂಶಗಳು

1. ಜೆಟ್ ಅಧಿವೇಶನಕ್ಕೂ ಮುನ್ನ ಇಂದು ಸರ್ವಪಕ್ಷ ಸಭೆ; ನಾಳೆಯಿಂದ ಸಂಸತ್ ಅಧಿವೇಶನ
2. ಐರೋಪ್ಯ ಒಕ್ಕೂಟ-ಭಾರತ ರಕ್ಷಣಾ ಪಾಲುದಾರಿಕೆಗೆ ಇಂದು ಸಹಿ ನಿರೀಕ್ಷೆ
3. ಗೋವಾದಲ್ಲಿ ಇಂದಿನಿಂದ ನಾಲ್ಕನೇ ಆವೃತ್ತಿಯ ಭಾರತ ಇಂಧನ ಸಪ್ತಾಹ
4. ಡಬ್ಲೂಪಿಎಲ್ ಟಿ-೨೦ ಕ್ರಿಕೆಟ್: ಆರ್‌ಸಿಬಿ ವಿರುದ್ಧ ಮುಂಬೈ ಇಂಡಿಯನ್ಸ್ ತಂಡಕ್ಕೆ ೧೫ ರನ್‌ಗಳ ಜಯ

<><><><>

ಬಜೆಟ್ ಅಧಿವೇಶನಕ್ಕೂ ಮುನ್ನ ಪ್ರಮುಖ ರಾಷ್ಟ್ರೀಯ ಸಮಸ್ಯೆಗಳು ಮತ್ತು ಶಾಸಕಾಂಗ ವ್ಯವಹಾರಗಳನ್ನು ಚರ್ಚಿಸಲು ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಇಂದು ಬೆಳಗ್ಗೆ ೧೧ ಗಂಟೆಗೆ ಸರ್ವಪಕ್ಷ ಸಭೆ ಕರೆದಿದ್ದಾರೆ. ಸಭೆಯು ನಾಳೆಯಿಂದ ಏಪ್ರಿಲ್ ೨ ರವರೆಗೆ ನಡೆಯುವ ಅಧಿವೇಶನದಲ್ಲಿ ಶಾಸಕಾಂಗ ವ್ಯವಹಾರಗಳನ್ನು ಸುಗಮಗೊಳಿಸುವ ಮತ್ತು ಪ್ರಮುಖ ರಾಷ್ಟ್ರೀಯ ಸಮಸ್ಯೆಗಳನ್ನು ನಿರ್ವಹಿಸುವ ಗುರಿಯನ್ನು ಹೊಂದಿದೆ. ಮೊದಲ ಹಂತದ ಅಧಿವೇಶನವು ನಾಳೆಯಿಂದ  ಫೆಬ್ರವರಿ ೧೩ ರವರೆಗೆ ನಿಗದಿಯಾಗಿದ್ದರೆ, ಎರಡನೇ ಹಂತದ ಅಧಿವೇಶನವು ಮಾರ್ಚ್ ೯ ರಿಂದ ಏಪ್ರಿಲ್ ೨ ರವರೆಗೆ ನಡೆಯಲಿದೆ. ಬಜೆಟ್ ಅಧಿವೇಶನವು ೩೦ ಸಭೆಗಳನ್ನು ಒಳಗೊಂಡಿದ್ದು, ಫೆಬ್ರವರಿ ೧ ರಂದು ೨೦೨೬-೨೭ ರ ಕೇಂದ್ರ ಬಜೆಟ್ ಅನ್ನು ಮಂಡಿಸಲಾಗುತ್ತದೆ. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಮೊದಲ ದಿನದಂದು ಜಂಟಿ ಅಧಿವೇಶನ ಉದ್ದೇಶಿಸಿ ಭಾಷಣ ಮಾಡಲಿದ್ದಾರೆ.

<><><><>

ಐರೋಪ್ಯ ಒಕ್ಕೂಟ-ಭಾರತ ರಕ್ಷಣಾ ಪಾಲುದಾರಿಕೆಗೆ ಇಂದು ಸಹಿ ಹಾಕಲಾಗುವುದು ಎಂದು ಐರೋಪ್ಯ ಆಯೋಗದ ಉಪಾಧ್ಯಕ್ಷೆ ಕಾಜಾ ಕಲ್ಲಾಸ್ ತಿಳಿಸಿದ್ದಾರೆ. ಐರೋಪ್ಯ ಆಯೋಗದ ಅಧ್ಯಕ್ಷ ಆಂಟೋನಿಯೊ ಲೂಯಿಸ್ ಸ್ಯಾಂಟೋಸ್ ಡ ಕೋಸ್ಟಾ ಮತ್ತು ಐರೋಪ್ಯ ಆಯೋಗದ ಅಧ್ಯಕ್ಷೆ

ಉರ್ಸುಲಾ ವಾನ್ ಡೆರ್ ಲೇಯೆನ್ ಅವರು ಭಾರತ ಭೇಟಿಯಲ್ಲಿದ್ದಾರೆ. ಅಲ್ಲದೇ ಅವರು ೭೭ನೇ ಗಣರಾಜ್ಯೋತ್ಸವದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು. ಅವರು ಇಂದು ೧೬ನೇ ಭಾರತ-ಇಯು ಶೃಂಗಸಭೆಯ ಸಹ-ಅಧ್ಯಕ್ಷರಾಗಲಿದ್ದಾರೆ. ಉಭಯ ದೇಶಗಳ ನಡುವಿನ ಆಳವಾದ ಬಾಂಧವ್ಯದ ಸಂಕೇತವಾಗಿ, ಇಯು ನೌಕಾ ಕಾರ್ಯಾಚರಣೆಗಳಾದ ಅಟಲಾಂಟಾ ಮತ್ತು ಆಸ್ಪಿಡ್ಸ್‌ನ ಸಿಬ್ಬಂದಿ ಮೊದಲ ಬಾರಿಗೆ ಗಣರಾಜ್ಯೋತ್ಸವದ ಮೆರವಣಿಗೆಯಲ್ಲಿ ಭಾಗವಹಿಸಿದ್ದರು ಎಂದು ಕಾಜಾ ಕಲ್ಲಾಸ್ ಹೇಳಿದ್ದಾರೆ. ಇನ್ನೊಂದೆಡೆ, ಭಾರತ ಮತ್ತು ಐರೋಪ್ಯ ಒಕ್ಕೂಟ ಇಂದು ಘೋಷಿಸಲಿರುವ ಪ್ರಸ್ತಾವಿತ ಮುಕ್ತ ವ್ಯಾಪಾರ ಒಪ್ಪಂದಕ್ಕಾಗಿ ಅಧಿಕೃತ ಮಟ್ಟದ ಮಾತುಕತೆಗಳನ್ನು ಪೂರ್ಣಗೊಳಿಸಿವೆ ಎಂದು ವಾಣಿಜ್ಯ ಕಾರ್ಯದರ್ಶಿ ರಾಜೇಶ್ ಅಗರ್ವಾಲ್ ತಿಳಿಸಿದ್ದಾರೆ. ವಾಣಿಜ್ಯವನ್ನು ಉತ್ತೇಜಿಸಲು ಮತ್ತು ಎರಡೂ ಕಡೆಯ ಆರ್ಥಿಕ ಸಂಬಂಧಗಳನ್ನು ಬಲಪಡಿಸಲು ಈ ಒಪ್ಪಂದವನ್ನು ಮಾಡಲಾಗಿದೆ. ಭಾರತೀಯ ದೃಷ್ಟಿಕೋನದಿಂದ ವ್ಯಾಪಾರ ಒಪ್ಪಂದವು ಸಮತೋಲಿತ ಮತ್ತು ಭವಿಷ್ಯದ ದೃಷ್ಟಿಕೋನದಿಂದ ಕೂಡಿದ್ದು, ಇದು ಐರೋಪ್ಯ ಒಕ್ಕೂಟದೊಂದಿಗೆ ಭಾರತದ ಉತ್ತಮ ಆರ್ಥಿಕ ಏಕೀಕರಣಕ್ಕೆ ಸಹಾಯ ಮಾಡುತ್ತದೆ. ಅಲ್ಲದೇ ಇದು ಉಭಯ ದೇಶಗಳ ವ್ಯಾಪಾರ ಮತ್ತು ಹೂಡಿಕೆಗಳನ್ನು ಮುನ್ನಡೆಸುತ್ತದೆ ಎಂದು ರಾಜೇಶ್ ಅಗರ್ವಾಲ್ ಹೇಳಿದ್ದಾರೆ.

<><><><>

೭೭ನೇ ಗಣರಾಜ್ಯೋತ್ಸವದ ಸಂದರ್ಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ನಿನ್ನೆ ರಾಷ್ಟ್ರಪತಿ ಭವನದಲ್ಲಿ ಔತಣ ಕೂಟವನ್ನು ಆಯೋಜಿಸಿದ್ದರು. ಐರೋಪ್ಯ ಆಯೋಗದ ಅಧ್ಯಕ್ಷ ಆಂಟೋನಿಯೊ ಕೋಸ್ಟಾ, ಐರೋಪ್ಯ ಆಯೋಗದ ಅಧ್ಯಕ್ಷೆ ಉರ್ಸುಲಾ ವಾನ್ ಡೆರ್ ಲೇಯೆನ್, ಉಪ ರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ ಮತ್ತು ಇತರೆ ಗಣ್ಯರು ಔತಣ ಕೂಟದಲ್ಲಿ ಭಾಗವಹಿಸಿದ್ದರು. ಇದೇ ವೇಳೆ, ವಿವಿಧ ಕ್ಷೇತ್ರಗಳಲ್ಲಿ ಗಮನಾರ್ಹ ಕೊಡುಗೆಗಳನ್ನು ನೀಡಿದ ಅನೇಕ ಗಣ್ಯರು ಮತ್ತು ಸರ್ಕಾರದ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳ ಫಲಾನುಭವಿಗಳು ಸಹ ಹಾಜರಿದ್ದರು. ಈ ಸಂದರ್ಭದಲ್ಲಿ ಕಲಾತ್ಮಕ ಮತ್ತು ಸಾಂಸ್ಕೃತಿಕ ಪ್ರದರ್ಶನಗಳು ಹಾಗೂ ಈಶಾನ್ಯ ರಾಜ್ಯಗಳ ಪಾಕಪದ್ಧತಿಯನ್ನು ಅತಿಥಿಗಳು ಆನಂದಿಸಿದರು.

<><><><>

ವಿಶ್ವದ ಮೂರನೇ ಅತಿದೊಡ್ಡ ಇಂಧನ ಬಳಕೆದಾರ ರಾಷ್ಟ್ರವಾಗಿರುವ ಭಾರತವು, ಇಂದಿನಿಂದ ೩೦ ರವರೆಗೆ, ನಾಲ್ಕನೇ ಆವೃತ್ತಿಯ ಭಾರತ ಇಂಧನ ಸಪ್ತಾಹವನ್ನು ಗೋವಾದ ಒಎನ್‌ಜಿಸಿ ಬೇತುಲ್‌ನಲ್ಲಿ ಆಯೋಜಿಸಿದೆ. ದಕ್ಷಿಣ ಗೋವಾದಲ್ಲಿ ನಡೆಯಲಿರುವ ಭಾರತ ಇಂಧನ ಸಪ್ತಾಹ ೨೦೨೬ ರ ನಾಲ್ಕನೇ ಆವೃತ್ತಿಯ ಸಮಾವೇಶವನ್ನು ಪ್ರಧಾನಿ ನರೇಂದ್ರ ಮೋದಿ ವರ್ಚುವಲ್ ಮೂಲಕ ಉದ್ಘಾಟಿಸಲಿದ್ದಾರೆ. ಉದ್ಘಾಟನೆಯ ನಂತರ ಪ್ರಧಾನಿ ಪ್ರತಿನಿಧಿಗಳನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಕೇಂದ್ರ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವ ಹರ್ದೀಪ್ ಸಿಂಗ್ ಪುರಿ, ಯುನೈಟೆಡ್ ಅರಬ್ ಎಮಿರೇಟ್ಸ್‌ನ ಕೈಗಾರಿಕೆ ಮತ್ತು ಸುಧಾರಿತ ತಂತ್ರಜ್ಞಾನ ಸಚಿವ ಡಾ. ಸುಲ್ತಾನ್ ಅಹ್ಮದ್ ಅಲ್ ಜಾಬರ್, ಕೆನಡಾದ ಇಂಧನ ಮತ್ತು ನೈಸರ್ಗಿಕ ಸಂಪನ್ಮೂಲ ಸಚಿವ ಟಿಮ್ ಹಾಡ್ಗ್ಸನ್ ಹಾಗೂ ಆಫ್ರಿಕಾ, ಮಧ್ಯಪ್ರಾಚ್ಯ, ಮಧ್ಯ ಏಷ್ಯಾ ಮತ್ತು ಜಾಗತಿಕ ದಕ್ಷಿಣ ರಾಷ್ಟ್ರಗಳ ಹಿರಿಯ ಸಚಿವರು ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ಇಂಧನ ಭದ್ರತೆಯನ್ನು ಬಲಪಡಿಸುವುದು, ಹೂಡಿಕೆಯನ್ನು ಸಜ್ಜುಗೊಳಿಸುವುದು ಮತ್ತು ಬೆಳವಣಿಗೆಯ ವಿವಿಧ ಹಂತಗಳಲ್ಲಿ ಆರ್ಥಿಕತೆಗಳಲ್ಲಿ ಅಳವಡಿಸಿಕೊಳ್ಳಬಹುದಾದ ಡಿಕಾರ್ಬೊನೈಸೇಶನ್‌ಗಾಗಿ ಪ್ರಾಯೋಗಿಕ ಮಾರ್ಗಗಳನ್ನು ಮುನ್ನಡೆಸುವತ್ತ ಭಾರತ ಇಂಧನ ಸಪ್ತಾಹ ಗಮನಹರಿಸುತ್ತದೆ. ಮೂರು ದಿನಗಳ ಈ ಕಾರ್ಯಕ್ರಮವು ಅಮೆರಿಕ, ಯುರೋಪ್, ಮಧ್ಯಪ್ರಾಚ್ಯ, ಆಫ್ರಿಕಾ ಮತ್ತು ಏಷ್ಯಾ-ಪೆಸಿಫಿಕ್‌ನಿಂದ ನಿಯೋಗಗಳನ್ನು ಹೊಂದಿರಲಿದ್ದು, ಇದು ಜಾಗತಿಕ ಇಂಧನ ಕ್ಷೇತ್ರದಲ್ಲಿ ಭಾರತದ ಬೆಳೆಯುತ್ತಿರುವ ಪಾತ್ರವನ್ನು ಒತ್ತಿಹೇಳುತ್ತದೆ.

<><><><>

ವೈದ್ಯಕೀಯ ಕ್ಷೇತ್ರದಲ್ಲಿನ ಅಪ್ರತಿಮ ಸೇವೆ ಹಾಗೂ ಸಾಮಾಜಿಕ ಬದ್ಧತೆಯನ್ನು ಗುರುತಿಸಿ ದಾವಣಗೆರೆಯ ಹೆಸರಾಂತ ವೈದ್ಯ ಡಾ. ಸುರೇಶ್ ಹನಗವಾಡಿ ಅವರಿಗೆ ಕೇಂದ್ರ ಸರ್ಕಾರ ಈ ಬಾರಿಯ ದೇಶದ ಪ್ರತಿಷ್ಠಿತ 'ಪದ್ಮಶ್ರೀ' ಪ್ರಶಸ್ತಿಯನ್ನು ಘೋಷಿಸಿದೆ. ರಕ್ತ ಹೆಪ್ಪುಗಟ್ಟದ ಅಪರೂಪದ ಹಾಗೂ ಮಾರಣಾಂತಿಕ ಕಾಯಿಲೆಯಾದ 'ಹಿಮೋಫಿಲಿಯಾ' ನಿಯಂತ್ರಣ ಮತ್ತು ಚಿಕಿತ್ಸೆಯಲ್ಲಿ ಡಾ. ಹನಗವಾಡಿ ಅವರು ಕ್ರಾಂತಿಕಾರಿ ಬದಲಾವಣೆ ತಂದಿದ್ದಾರೆ. ದಶಕಗಳ ಹಿಂದೆ ಈ ಕಾಯಿಲೆಯ ಬಗ್ಗೆ ಜನರಲ್ಲಿ ಅರಿವು ಇಲ್ಲದ ಕಾಲದಲ್ಲೇ ಕಾರ್ಯಪ್ರವೃತ್ತರಾದ ಇವರು, 'ಕರ್ನಾಟಕ ಹಿಮೋಫಿಲಿಯಾ ಸೊಸೈಟಿ'ಯನ್ನು ಸ್ಥಾಪಿಸುವ ಮೂಲಕ ಸಾವಿರಾರು ರೋಗಿಗಳಿಗೆ

ಆಶಾಕಿರಣವಾಗಿದ್ದಾರೆ. ಹಿಮೋಫಿಲಿಯಾ ಚಿಕಿತ್ಸೆಯು ಅತ್ಯಂತ ದುಬಾರಿಯಾಗಿದ್ದು, ಸಾಮಾನ್ಯ ಜನರಿಗೆ ಎಟುಕದಂತಿರುವಾಗ, ಡಾ. ಹನಗವಾಡಿ ಅವರು ಸಾವಿರಾರು ಬಡ ರೋಗಿಗಳಿಗೆ ಉಚಿತ ಚಿಕಿತ್ಸೆ, ಅಗತ್ಯ ಔಷಧ ಹಾಗೂ ಮಾರ್ಗದರ್ಶನ ನೀಡುತ್ತಾ ಬಂದಿದ್ದಾರೆ. ಇವರ ಮಾರ್ಗದರ್ಶನದಲ್ಲಿ ರಾಜ್ಯದ ಹಲವೆಡೆ ಹಿಮೋಫಿಲಿಯಾ ಚಿಕಿತ್ಸಾ ಕೇಂದ್ರಗಳು ಸ್ಥಾಪಿತವಾಗಿದ್ದು, ರೋಗಿಗಳ ಬದುಕು ಹಸನಾಗಿದೆ. 'ಪದ್ಮಶ್ರೀ' ಪ್ರಶಸ್ತಿ ಲಭಿಸಿರುವ ಕುರಿತು ಡಾ. ಸುರೇಶ್ ಹನಗವಾಡಿ ಅವರು ಆಕಾಶವಾಣಿಯೊಂದಿಗೆ ತಮ್ಮ ಸಂತಸ ಹಂಚಿಕೊಂಡಿದ್ದಾರೆ.

ಧ್ವನಿ: ಡಾ. ಸುರೇಶ್ ಹನಗವಾಡಿ

<><><><>

ವಡೋದರಾದ ಬಿಸಿಎ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಮಹಿಳಾ ಪ್ರೀಮಿಯರ್ ಲೀಗ್-ಡಬ್ಲ್ಯೂಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ವಿರುದ್ಧ ಮುಂಬೈ ಇಂಡಿಯನ್ಸ್ ತಂಡ ೧೫ ರನ್‌ಗಳಿಂದ ಜಯ ಗಳಿಸಿದೆ. ಮೊದಲು ಬ್ಯಾಟಿಂಗ್ ಮಾಡಿದ ಮುಂಬೈ ಇಂಡಿಯನ್ಸ್ ತಂಡ, ನಿಗದಿತ ೨೦ ಓವರ್‌ಗಳಲ್ಲಿ ೪ ವಿಕೆಟ್ ನಷ್ಟಕ್ಕೆ ೧೯೯ ರನ್ ಗಳಿಸಿತು. ಗೆಲುವಿನ ಗುರಿ ಬೆನ್ನತ್ತಿದ ಆರ್‌ಸಿಬಿ, ನಿಗದಿತ ೨೦ ಓವರ್‌ಗಳಲ್ಲಿ ೯ ವಿಕೆಟ್ ನಷ್ಟಕ್ಕೆ ೧೮೪ ರನ್ ಗಳಿಸಲಷ್ಟೇ ಶಕ್ತವಾಯಿತು. ಮುಂಬೈ ಇಂಡಿಯನ್ಸ್ ಪರ ೫೭ ಎಸೆತಗಳಲ್ಲಿ ಅಜೇಯ ಶತಕ ಸಿಡಿಸಿದ ಬ್ರಂಟ್, ಪಂದ್ಯ ಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

<><><><>

ಜಿಂಬಾಬ್ವೆಯ ಬುಲವಾಯೊದ ಕ್ವೀನ್ಸ್ ಸ್ಪೋರ್ಟ್ಸ್ ಕ್ಲಬ್‌ನಲ್ಲಿ ಇಂದು ನಡೆಯಲಿರುವ ೨೦೨೬ ರ ಹತ್ತೊಂಬತ್ತು ವರ್ಷದೊಳಗಿನವರ ಕ್ರಿಕೆಟ್ ವಿಶ್ವಕಪ್‌ನ ಸೂಪರ್ ಸಿಕ್ಸ್ ಹಂತದ ೬ನೇ ಪಂದ್ಯದಲ್ಲಿ ಜಿಂಬಾಬ್ವೆ ತಂಡವು ಭಾರತ ತಂಡವನ್ನು ಎದುರಿಸಲಿದೆ. ಪಂದ್ಯ ಮಧ್ಯಾಹ್ನ ೧ ಗಂಟೆಗೆ ಆರಂಭವಾಗಲಿದೆ. ಭಾರತ ತಂಡವು ಪಂದ್ಯಾವಳಿಯಲ್ಲಿ ಇಲ್ಲಿಯವರೆಗೆ ಎಲ್ಲಾ ಗುಂಪು ಹಂತದ ಪಂದ್ಯಗಳಲ್ಲಿ ಅಜೇಯವಾಗಿದ್ದು, ಯುನೈಟೆಡ್ ಸ್ಟೇಟ್ಸ್, ಬಾಂಗ್ಲಾದೇಶ ಮತ್ತು ನ್ಯೂಜಿಲೆಂಡ್ ವಿರುದ್ಧ ಜಯಗಳಿಸಿದೆ.

<><><><>

ಕೇಂದ್ರ ಸರ್ಕಾರ ತೊಗರಿ, ಮಸೂರ್ ಮತ್ತು ಉದ್ದು ಸೇರಿದಂತೆ ದ್ವಿದಳ ಧಾನ್ಯಗಳ ೧೦೦ ಪ್ರತಿಶತ ಖರೀದಿಯನ್ನು ಕನಿಷ್ಠ ಬೆಂಬಲ ಬೆಲೆಯಲ್ಲಿ ಖಚಿತಪಡಿಸಿಕೊಳ್ಳಲು ಕೆಲಸ ಮಾಡುತ್ತಿದೆ

ಎಂದು ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ತಿಳಿಸಿದ್ದಾರೆ. ನವದೆಹಲಿಯಲ್ಲಿ ೭೭ ನೇ ಗಣರಾಜ್ಯೋತ್ಸವದ ಸಂದರ್ಭದಲ್ಲಿ ಸರ್ಕಾರವು ವಿಶೇಷವಾಗಿ ಆಹ್ವಾನಿಸಿದ ರೈತರೊಂದಿಗೆ ಸಂವಾದ ನಡೆಸಿದ ಸಚಿವರು, ಈ ಘೋಷಣೆಯನ್ನು ಮಾಡಿದ್ದಾರೆ. ಕೃಷಿಯು ಭಾರತೀಯ ಆರ್ಥಿಕತೆಯ ಬೆನ್ನೆಲುಬಾಗಿದೆ. ದೇಶದ ಜನಸಂಖ್ಯೆಯ ಸುಮಾರು ೭೦ ಪ್ರತಿಶತ ಜನರು ನೇರವಾಗಿ ಅಥವಾ ಪರೋಕ್ಷವಾಗಿ ಕೃಷಿ ಮತ್ತು ಸಂಬಂಧಿತ ಚಟುವಟಿಕೆಗಳನ್ನು ಅವಲಂಬಿಸಿದ್ದಾರೆ. ಭಾರತವು ಚೀನಾವನ್ನು ಹಿಂದಿಕ್ಕಿ ವಿಶ್ವದ ಅತಿದೊಡ್ಡ ಅಕ್ಕಿ ಉತ್ಪಾದಕ ರಾಷ್ಟ್ರವಾಗಿದೆ, ಇದು ರೈತರಿಗೆ, ವಿಶೇಷವಾಗಿ ಬಾಸ್ಮತಿ ಅಕ್ಕಿ ಬೆಳೆಗಾರರಿಗೆ ಉತ್ತಮ ಬೆಲೆ ದೊರೆಯುವಂತೆ ಮಾಡಿದೆ. ದೇಶೀಯ ಬೆಳೆಗಾರರನ್ನು ರಕ್ಷಿಸಲು, ಸರ್ಕಾರವು ದ್ವಿದಳ ಧಾನ್ಯಗಳ ಮೇಲೆ ಶೇಕಡಾ ೩೦ ರಷ್ಟು ಆಮದು ಸುಂಕವನ್ನು ವಿಧಿಸಿದೆ ಎಂದು ಸಚಿವರು ಹೇಳಿದ್ದಾರೆ. ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯನ್ನು ಮತ್ತಷ್ಟು ಬಲಪಡಿಸಲಾಗುತ್ತಿದೆ. ಕಾಡು ಪ್ರಾಣಿಗಳು ಮತ್ತು ನೀರಿನ ಅಡಚಣೆಯಿಂದ ಉಂಟಾಗುವ ಬೆಳೆ ನಷ್ಟಗಳಿಗೆ ವಿಮಾ ರಕ್ಷಣೆಯನ್ನು ವಿಸ್ತರಿಸುವ ಬಗ್ಗೆ ಸರ್ಕಾರ ಪರಿಗಣಿಸುತ್ತಿದೆ ಎಂದ ಸಚಿವರು, ನಿಗದಿತ ಅವಧಿಯನ್ನು ಮೀರಿ ಕ್ಲೇಮ್ ಪಾವತಿಗಳು ವಿಳಂಬವಾದರೆ ವಿಮಾ ಕಂಪನಿಗಳು ಶೇಕಡಾ ೧೨ ರಷ್ಟು ಬಡ್ಡಿಯನ್ನು ಪಾವತಿಸಲು ಹೊಣೆಗಾರರಾಗಿರುತ್ತಾರೆ ಎಂದು ಸಚಿವರು ತಿಳಿಸಿದ್ದಾರೆ. ಕೃಷಿ ಕ್ಷೇತ್ರದಲ್ಲಿ ಡಿಜಿಟಲ್ ಸುಧಾರಣೆಗಳನ್ನು ಶ್ಲಾಘಿಸಿದ ಸಚಿವರು, ಸಾಲಗಳು, ವಿಮೆ ಮತ್ತು ಕಲ್ಯಾಣ ಯೋಜನೆಗಳ ಪ್ರವೇಶವನ್ನು ಸರಳಗೊಳಿಸಲು, ಉಪಗ್ರಹ ಆಧಾರಿತ ಬೆಳೆ ಮೌಲ್ಯಮಾಪನದ ಮೂಲಕ ದಾಖಲೆಗಳು ಮತ್ತು ವಿಳಂಬವನ್ನು ಕಡಿಮೆ ಮಾಡಲು ರೈತರಿಗೆ ವಿಶಿಷ್ಟ ಗುರುತಾಗಿ ರೈತ ಐಡಿಯನ್ನು ಪರಿಚಯಿಸಲಾಗುತ್ತಿದೆ ಎಂದು ಮಾಹಿತಿ ನೀಡಿದ್ದಾರೆ. ನಕಲಿ ಬೀಜಗಳು, ರಸಗೊಬ್ಬರಗಳು ಮತ್ತು ಕೀಟನಾಶಕಗಳ ವಿರುದ್ಧ ಕಠಿಣ ಕ್ರಮವನ್ನು ಅವರು ಘೋಷಿಸಿದರು, ಗಂಭೀರ ಉಲ್ಲಂಘನೆಗಳಿಗೆ ಜೈಲು ಶಿಕ್ಷೆಯ ನಿಬಂಧನೆಗಳೊಂದಿಗೆ ೩೦ ಲಕ್ಷ ರೂಪಾಯಿಗಳವರೆಗೆ ದಂಡವನ್ನು ಹೆಚ್ಚಿಸಲಾಗುವುದು ಎಂದು ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>